ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಂಖ್ಯೆ : ಸಿ5(2) ಪವ್ಯ.ಬ.13/2019-20** ದಿನಾಂಕ: 02-01-2021

***ಅಧಿಸೂಚನೆ***

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರುಗಳಿಗೆ ಪತ್ರಾಂಕಿತ ಸಹಾಯಕರಾಗಿ ಮುಂಬಡ್ತಿ ನೀಡಲು ತೀರ್ಮಾನಿಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಬಿ" ವೃಂದದ ವೇತನ ಶ್ರೇಣಿ ರೂ. 40900-78200 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಇವರುಗಳಿಗೆ ಪತ್ರಾಂಕಿತ ಸಹಾಯಕ ಹುದ್ದೆಗಳಿಗೆ ವೇತನ ಶ್ರೇಣಿ ರೂ. 43100-83900 ರಂತೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಅವರು ಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ. ಈ ಕೆಳಕಂಡ ಅಧಿಕಾರಿಗಳಿಗೆ ಈ ಬಡ್ತಿ ಆದೇಶ ಹೊರಡಿಸಿದ 15 ದಿನಗಳ ನಂತರ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ: 06-02-2014 ರ ಆದೇಶದಂತೆ ಅಂಗವಿಕಲ ನೌಕರರಿಗೆ ಆದ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಈ ಕೆಳಕಂಡ ನೌಕರರು ಅಂಥ ಬಡ್ತಿಯನ್ನು ಹೊಂದಲು ಇಚ್ಛಿಸದಿದ್ದರೆ, ಈ ಆದೇಶ ದಿನಾಂಕದಿಂದ [ಸದರಿ ಆದೇಶದ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್ www.schooleducation.kar.in ನಲ್ಲಿ ಪ್ರಕಟಿಸಲಾಗಿದೆ.] 07 ದಿನಗಳ ಒಳಗೆ ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವುದು. 07 ದಿನಗಳ ನಂತರ ಅಂದರೆ ದಿನಾಂಕ: 08-01-2021 ರ ನಂತರ ಯಾವುದೇ ಕೋರಿಕೆಯನ್ನು ಪರಿಗಣಿಸುವುದಿಲ್ಲ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು<br>ಶ್ರೀ / ಶ್ರೀಮತಿ |
|---|---|---|
| 01 | 195 | ಶ್ರೀ ಸೈಯದ್ ವಜೀರ್ ಅಹಮದ್, ಪತ್ರಾಂಕಿತ ವ್ಯವಸ್ಥಾಪಕರು, ಪ್ರಸ್ತುತ ನಿಯೋಜನೆ ಮೇರೆಗೆ ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ, 12 ನೇ ಮಹಡಿ ವಿವಿ ಗೋಪುರ ಡಾ॥ ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು |
| 02 | 198 | ಶ್ರೀ.ಅಲಿಪ್ ಉಲ್ಲಾ ಖಾನ್. ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉತ್ತರ ವಲಯ-2, ರಾಜಾಜಿನಗರ, ಬೆಂಗಳೂರು. |
| 03 | 202 | ಬಿ.ಎಸ್. ಶಾಂತರಾಜು, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ. |
| 04 | 203 | ಟಿ.ಎ.ಬಸವರಾಜು, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ |
| 05 | 204 | ಶ್ರೀಮತಿ ಉಷಾದೇವಿ, ಸಹಾಯಕ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು |

| | | |
|---|---|---|
| 06 | 205 | ಡಿ. ಕೊಟ್ರೇಶ್, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಜಗಳೂರು ತಾಲ್ಲೂಕು, ದಾವಣಗೆರೆ. |
| 07 | 274 | ಹೆಚ್.ಎಸ್.ಹುತ್ತೇಶ್, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |

ಸ್ಥಾನಪನ್ನ ಬಡ್ತಿ ಹೊಂದಿದ ಅಧಿಕಾರಿಗಳು ದಿನಾಂಕ: 12-01-2021 ರಂದು ಬೆಳಿಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ನಡೆಸಲಾಗುವುದು. ಬಡ್ತಿ ಹೊಂದಿದ ಅಧಿಕಾರಿಗಳು ನಿಗಧಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

[ವಿ.ಅನ್ಬುಕುಮಾರ್]
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಜಣಇ ಖ೦ಣಜಜ ಅ೦ಲಿಥಿ.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
7) ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
8) ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
9) ವಿಭಾಗೀಯ ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
10) ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.

ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.

11) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
12) ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
13) ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
14) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
15) ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
16) ಸಂಬಂಧಿಸಿದ ಅಧೀಕ್ಷಕರುಗಳಿಗೆ.
17) ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
18) ಕಛೇರಿ ಪ್ರತಿ.